# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 333

ಸದಸ್ಯರ ಹೆಸರು : ಶ್ರೀ ಗೋವಿಂದ ರಾಜು

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 10.12.2025

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಅವಧಿ ಮೀರಿರುವ ವಾಹನಗಳ ಸಂಖ್ಯೆಯೆಷ್ಟು; ಹಾಗೂ ಸಾರಿಗೆಗೆ ಯೋಗ್ಯವಲ್ಲದ ವಾಹನಗಳು ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ಬಸ್‌ಗಳನ್ನು ನಿರುಪಯುಕ್ತಗೊಳಿಸಲು 15 ವರ್ಷ ವಯೋಮಾನವನ್ನು ನಿಗದಿಪಡಿಸಿದ್ದು, ಅದರಂತೆ ಕ್ರಮ ವಹಿಸಲಾಗುತ್ತಿರುವುದರಿಂದ ಅವಧಿ ಮೀರಿರುವ ಬಸ್‌ಗಳು ಯಾವುದು ಕಾರ್ಯಾಚರಣೆಯಲ್ಲಿರುವುದಿಲ್ಲ.<br><br>ಮುಂದುವರೆದು, ಕ.ರಾ.ರ.ಸಾ.ನಿಗಮದ ಯಾಂತ್ರಿಕ ಇಲಾಖೆಯಿಂದ ಹೊರಡಿಸಿರುವ ಸುತ್ತೋಲೆ ಸಂಖ್ಯೆ:810/2023 ದಿನಾಂಕ:23.09.2023ರನ್ವಯ ನಿಗಮದಲ್ಲಿ ವಾಹನಗಳನ್ನು ನಿಷ್ಕ್ರಿಯಗೊಳಿಸಲು 'ಅನುಬಂಧ'ದಲ್ಲಿ ಸೂಚಿಸಿರುವ ಮಾನದಂಡಗಳನ್ನು ಅನುಸರಿಸಲಾಗುತ್ತಿರುತ್ತದೆ.<br><br>ಇದಲ್ಲದೆ, ಹೆಚ್ಚಿನ ಕಿ.ಮೀ. ಕ್ರಮಿಸಿರುವ ವಾಹನಗಳ, ಭೌತಿಕ ಹಾಗೂ ತಾಂತ್ರಿಕ ಸ್ಥಿತಿಗಳನ್ನಾಧರಿಸಿ ಬಸ್ಸುಗಳನ್ನು ನಿಷ್ಕ್ರಿಯಗೊಳಿಸಲು ಅನುಮತಿಸಲಾಗುತ್ತಿರುತ್ತದೆ. ಮಿತಿಗಿಂತ ಹೆಚ್ಚಿನ ಕಿ.ಮೀ. ಕ್ರಮಿಸಿ, ತಾಂತ್ರಿಕವಾಗಿ ಸುಸ್ಥಿತಿಯಲ್ಲಿರುವ ಬಸ್‌ಗಳಿಗೆ ಅವಶ್ಯವಿದ್ದಲ್ಲಿ ಕವಚ ಪುನಶ್ಚೇತನ ಕಾರ್ಯಗಳನ್ನು ಕೈಗೊಂಡು ಕಾರ್ಯಾಚರಣೆಗೊಳಿಸಲಾಗುತ್ತಿದೆ.<br><br>ಆದಾಗ್ಯೂ, ಪ್ರತಿ ವರ್ಷ ನಿಗಮದ ಬಸ್‌ಗಳನ್ನು ಅರ್ಹತಾ ಪತ್ರ ನವೀಕರಣಕ್ಕೆ ಒಳಪಡಿಸಿ ಸುಸ್ಥಿತಿಯಲ್ಲಿರುವುದನ್ನು ಖಾತ್ರಿಪಡಿಸಿಕೊಂಡು ಕಾರ್ಯಾಚರಣೆಗೊಳಿಸಲಾಗುತ್ತಿರುತ್ತದೆ. |
| ಆ. | ಅವಧಿ ಮೀರಿರುವ ವಾಹನಗಳನ್ನು ಬದಲಾಯಿಸಲು ಹಾಗೂ ಹೊಸ ಮಾರ್ಗಗಳಿಗೆ ಬಸ್ಸುಗಳನ್ನು ವ್ಯವಸ್ಥೆ ಮಾಡಲು ಬೇಕಾಗಿರುವ ಒಟ್ಟು ವಾಹನಗಳ ಸಂಖ್ಯೆ; | 2025-26ನೇ ಸಾಲಿನಲ್ಲಿ 500 ಕರ್ನಾಟಕ ಸಾರಿಗೆ ಮತ್ತು 144 ನಗರ ಸಾರಿಗೆ ಸೇರಿ ಒಟ್ಟು 644 ಹೊಸ ಬಸ್‌ಗಳನ್ನು ಸೇರ್ಪಡೆಗೊಳಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |
| | | |

| | | |
|---|---|---|
| ಇ. | ವೋಲ್ವೋ ವಾಹನಗಳು ಸಂಚಾರಕ್ಕೆ ಯೋಗ್ಯವಾಗಿರಲು ಎಷ್ಟು ಕಿ.ಮೀಗಳನ್ನು ನಿಗದಿಪಡಿಸಿದೆ. ಹಾಗೂ ಅವಧಿ ಮೀರಿ ಸಂಚರಿಸುತ್ತಿರುವ ವೋಲ್ವೋ ವಾಹನಗಳ ಸಂಖ್ಯೆ ಎಷ್ಟು; | ಕ.ರಾ.ರ.ಸಾ.ನಿಗಮದಲ್ಲಿ ವೋಲ್ವೋ ಸೀಟರ್ ಮತ್ತು ಸ್ಲೀಪರ್ ಬಸ್‌ಗಳನ್ನು ನಿಷ್ಕ್ರಿಯಗೊಳಿಸಲು 15.00 ಲಕ್ಷ ಕಿ.ಮೀ ಅಥವಾ 15 ವರ್ಷಗಳ ಮಾನದಂಡಗಳನ್ನು ಅನುಸರಿಸಲಾಗುತ್ತಿರುತ್ತದೆ. ಆದಾಗ್ಯೂ ಬಸ್‌ಗಳ ಭೌತಿಕ ಹಾಗೂ ತಾಂತ್ರಿಕ ಸ್ಥಿತಿಗಳನ್ನಾಧರಿಸಿ ಕೆಲವು ಬಸ್ಸುಗಳನ್ನು ನಿಷ್ಕ್ರಿಯಗೊಳಿಸಲು ಅನುಮತಿಸಲಾಗುತ್ತಿರುತ್ತದೆ<br>ಬಸ್‌ಗಳು ಸುಸ್ಥಿಯಲ್ಲಿದ್ದಲ್ಲಿ ಮಾತ್ರ ನಿಗದಿಪಡಿಸಿದ ಕಿ.ಮೀ ಕ್ರಮಿಸಿದ್ದರೂ ಸಹ 15ವರ್ಷ ವಯೋಮಾನ ಪೂರೈಸುವವರೆಗೂ ಕಾರ್ಯಾಚರಣೆಗೆ ನಿಯೋಜಿಸುತ್ತಿದ್ದು, ಸದರಿ ಅವಧಿ ಮೀರಿ ಸಂಚರಿಸುತ್ತಿರುವ ವೋಲ್ವೋ ಬಸ್‌ಗಳು ಯಾವುದು ಇರುವುದಿಲ್ಲ |
| ಈ. | ತುರ್ತಾಗಿ ಹಳೆಯ ವಾಹನಗಳನ್ನು ಬದಲಾಯಿಸಲು ಹಾಗೂ ಹೊಸ ಮಾರ್ಗಗಳಿಗೆ ಬಸ್ ವ್ಯವಸ್ಥೆ ಮಾಡಲು ಎಷ್ಟು ವೋಲ್ವೋ ಬಸ್ಸುಗಳ ಅವಶ್ಯಕತೆ ಇದೆ; ಇದರ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? | ಕ.ರಾ.ರ.ಸಾ.ನಿಗಮದಲ್ಲಿ 2025-26ನೇ ಸಾಲಿಗೆ 15 ಹೊಸ ವೋಲ್ವೋ ಫ್ಲೈ-ಬಸ್ ಸೇವೆಯ ಅನುಸೂಚಿಗಳನ್ನು ಪ್ರಾರಂಭಿಸಲು ಯೋಜಿಸಲಾಗಿದ್ದು, ಲಭ್ಯತೆಗನುಗುಣವಾಗಿ ಮುಂದಿನ ದಿನಗಳಲ್ಲಿ ಒದಗಿಸಲು ಆದ್ಯತೆಯ ಮೇರೆಗೆ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಟಿಡಿ 216 ಟಿಸಿಕ್ಯೂ 2025

(ರಾಮಲಿಂಗಾರೆಡ್ಡಿ)

ಸಾರಿಗೆ ಮತ್ತು ಮುಜರಾಯಿ ಸಚಿವರು